**Akashvani : Bangalore**
**Regional Bulletin In Kannada**
**08.05.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

## ಮುಖ್ಯಾಂಶಗಳು

**೧. ರಾಜ್ಯದಲ್ಲಿ ಬಾಹ್ಯಾಕಾಶ ತಂತ್ರಜ್ಞಾನಗಳ ಶ್ರೇಷ್ಠತಾ ಕೇಂದ್ರ ಮತ್ತು ಉತ್ಪಾದನಾ ಪಾರ್ಕ್ ಸ್ಥಾಪನೆಗೆ ರಾಜ್ಯಸರ್ಕಾರದಿಂದ ಮಹತ್ವದ ಒಪ್ಪಂದ.**

**೨. ಪಹಲ್ಗಾಮ್ ಉಗ್ರಗಾಮಿ ಕೃತ್ಯಕ್ಕೆ ಪ್ರತೀಕಾರವಾಗಿ ಆಪರೇಷನ್ ಸಿಂಧೂರ ಬೆಂಬಲಿಸಿ ನಾಳೆ ಮುಖ್ಯಮಂತ್ರಿ ನೇತೃತ್ವದಲ್ಲಿ ತಿರಂಗಾ ಯಾತ್ರೆ**

**೩. ದೇವಾಲಯಗಳು ರಾಷ್ಟ್ರೀಯ ದೃಷ್ಟಿಕೋನದ ಪ್ರತೀಕ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್**

**೪. ಕರ್ನಾಟಕ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿ ಶಿಫಾರಸ್ಸು ಮುಂದಿನ ಸೆಪ್ಟೆಂಬರ್ ವೇಳೆಗೆ ಸರ್ಕಾರಕ್ಕೆ sಸಲ್ಲಿಕೆ - ಅಧ್ಯಕ್ಷ ಪ್ರೊ ಎಂ.ಗೋವಿಂದ ರಾವ್**

**<><*<><>*><>**

ರಾಜ್ಯಸರ್ಕಾರ ನ್ಯೂಸ್ಪೇಸ್ ಆರ್ಥಿಕತೆಗೆ ಗಮನಾರ್ಹವಾದ ಉತ್ತೇಜನ ನೀಡಲು ಭಾರತೀಯ ರಾಷ್ಟ್ರೀಯ ಬಾಹ್ಯಾಕಾಶ ಪ್ರಚಾರ ಮತ್ತು ಅಧಿಕಾರ ಕೇಂದ್ರ ದೊಂದಿಗೆ ಎರಡು ಒಪ್ಪಂದಗಳಿಗೆ ಸಹಿ ಹಾಕಿದೆ. ಈ ಒಪ್ಪಂದಗಳು ಬೆಂಗಳೂರಿನಲ್ಲಿ ಬಾಹ್ಯಾಕಾಶ ತಂತ್ರಜ್ಞಾನಗಳ ಶ್ರೇಷ್ಠತಾ ಕೇಂದ್ರ ಮತ್ತು ಸಾರ್ವಜನಿಕ-ಖಾಸಗಿ ಪಾಲುದಾರಿಕೆ ಮಾದರಿಯ ಮೂಲಕ ಮೀಸಲಾದ ಬಾಹ್ಯಾಕಾಶ ಉತ್ಪಾದನಾ ಉದ್ಯಾನವನವನ್ನು ಸ್ಥಾಪಿಸಲು ಅಡಿಪಾಯ ಹಾಕುತ್ತವೆ. ಈ ಸಹಯೋಗವು ದೇಶದ ಪ್ರಮುಖ ವಾಣಿಜ್ಯ ಬಾಹ್ಯಾಕಾಶ ಕೇಂದ್ರವಾಗುವ ರಾಜ್ಯದ ಧ್ಯೇಯದಲ್ಲಿ ಒಂದು ಕಾರ್ಯತಂತ್ರದ ಹೆಜ್ಜೆಯನ್ನು ಗುರುತಿಸುತ್ತದೆ. ಸೆಂಟರ್ ಆಫ್ ಎಕ್ಸಲೆನ್ಸ್ ನಾವೀನ್ಯತೆ, ಅತ್ಯಾಧುನಿಕ ಸಂಶೋಧನೆ ಮತ್ತು ಪ್ರತಿಭೆ ಅಭಿವೃದ್ಧಿಯನ್ನು ಬೆಳೆಸುವತ್ತ ಗಮನಹರಿಸುತ್ತದೆ, ಉತ್ಪಾದನಾ ಪಾರ್ಕ್ ಮುಂದಿನ ಪೀಳಿಗೆಯ ಉಪಗ್ರಹ ಮತ್ತು ವಾಹನ ಉತ್ಪಾದನೆಯನ್ನು ನಿರ್ವಹಿಸುತ್ತದೆ. ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮತ್ತು ಐಎನ್-ಸ್ಪೇಸ್ ಅಧ್ಯಕ್ಷ ಡಾ. ಪವನ್ ಗೋಯೆಂಕಾ ಅವರ ಸಮ್ಮುಖದಲ್ಲಿ ಈ ಒಪ್ಪಂದಗಳಿಗೆ ಎಲೆಕ್ಟ್ರಾನಿಕ್ಸ್, ಐಟಿ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು

ತಂತ್ರಜ್ಞಾಖಾತೆ ಕಾರ್ಯದರ್ಶಿ ಡಾ. ಏಕರೂಪ್ ಕೌರ್ ಮತ್ತು ಐಎನ್-ಸ್ಪೇಸ್ ಜಂಟಿ ಕಾರ್ಯದರ್ಶಿ ಲೋಚನ್ ಸೆಹ್ರಾ ಸಹಿ ಹಾಕಿದರು. ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಪಾಲುದಾರಿಕೆಯನ್ನು ಸ್ವಾಗತಿಸಿದ್ದಾರೆ: ಇನ್-ಸ್ಪೇಸ್ ಜೊತೆಗಿನ ಒಪ್ಪಂದಗಳು ಬಾಹ್ಯಾಕಾಶ ತಂತ್ರಜ್ಞಾನದಂತಹ ಹೆಚ್ಚಿನ ಸಾಮರ್ಥ್ಯದ ವಲಯಗಳಲ್ಲಿ ಸಾರ್ವಜನಿಕ-ಖಾಸಗಿ ಪಾಲುದಾರಿಕೆಗಳನ್ನು ಬಲಪಡಿಸುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ. ಪ್ರಮುಖ ಸಂಸ್ಥೆಗಳ ಉಪಸ್ಥಿತಿ ಮತ್ತು ಅಭಿವೃದ್ಧಿ ಹೊಂದುತ್ತಿರುವ ನಾವೀನ್ಯತೆ ಪರಿಸರ ವ್ಯವಸ್ಥೆಯೊಂದಿಗೆ, ಕರ್ನಾಟಕವು ಭಾರತದ ಬಾಹ್ಯಾಕಾಶ ಪ್ರಯಾಣವನ್ನು ಬೆಂಬಲಿಸಲು ಮಾತ್ರವಲ್ಲದೆ ಮುನ್ನಡೆಸಲು ಸಿದ್ಧವಾಗಿದೆ." ಎಂದು ಮುಖ್ಯಮಂತ್ರಿಗಳು ಹೇಳಿದ್ದಾರೆ.

ರಾಜ್ಯ ಸರ್ಕಾರದ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, "ಇನ್-ಸ್ಪೇಸ್ ಜೊತೆಗಿನ ಸಹಯೋಗವು ಕರಡು ಬಾಹ್ಯಾಕಾಶ ತಂತ್ರಜ್ಞಾನ ನೀತಿಯಲ್ಲಿ ವಿವರಿಸಿರುವ ದೃಷ್ಟಿಕೋನದ ನೇರ ಪ್ರತಿಬಿಂಬವಾಗಿದೆ. ಉತ್ಪಾದನಾ ಪಾರ್ಕ್ ಪ್ಲಗ್-ಅಂಡ್-ಪ್ಲೇ ಕಾರ್ಖಾನೆಗಳು ಮತ್ತು ಮೀಸಲಾದ ಪರೀಕ್ಷಾ ಸೌಲಭ್ಯಗಳು ಸೇರಿದಂತೆ ಜಾಗತಿಕವಾಗಿ ಸ್ಪರ್ಧಾತ್ಮಕ ಮೂಲಸೌಕರ್ಯವನ್ನು ನಿರ್ಮಿಸಲು ಸರ್ಕಾರ ಬದ್ಧವಾಗಿದೆ. ಜೊತೆಗೆ ಸ್ಟಾರ್ಟ್‌ಅಪ್‌ಗಳು, ಎಂಎಸ್‌ಎಂಇಗಳು ಮತ್ತು ದೊಡ್ಡ ಉದ್ಯಮ ಗಳಿಗೆ ಗುರಿಪಡಿಸಿದ ಬೆಂಬಲವನ್ನುನೀಡಲಾಗುವುದೆಂದು ತಿಳಿಸಿದ್ದಾರೆ..

**<><*<><>*><>**

ಪಹಲ್ಗಾಮ್ ಉಗ್ರಗಾಮಿ ಕೃತ್ಯಕ್ಕೆ ಪ್ರತೀಕಾರವಾಗಿ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಡೆಸುತ್ತಿರುವ ಭಾರತೀಯ ಯೋಧರಿಗೆ ಬೆಂಬಲ ಸೂಚಿಸಲು ನಾಳೆ ಬೆಳಗ್ಗೆ ೯.೩೦ ರಿಂದ ೧೦.೩೦ ರವರೆಗೆ ಬೆಂಗಳೂರಿನ ಕೆ.ಆರ್. ವೃತ್ತದಿಂದ ಚಿನ್ನಸ್ವಾಮಿ ಕ್ರಿಕೆಟ್ ಸ್ಟೇಡಿಯಂ ಬಳಿ ಇರುವ ಮಿನ್ಸ್ಕ್ ಸ್ಕ್ವೇರ್ ವರೆಗೆ 'ತಿರಂಗಾ ಯಾತ್ರೆ' ಹಮ್ಮಿಕೊಳ್ಳಲಾಗಿದೆ. ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆಯುವ ಈ ಯಾತ್ರೆಯಲ್ಲಿ ಎಲ್ಲ ರಾಜಕೀಯ ಪಕ್ಷಗಳ ಮುಖಂಡರು, ಕಾರ್ಯಕರ್ತರು, ಸಾರ್ವಜನಿಕರು, ಸರಕಾರಿ, ಖಾಸಗಿ ಉದ್ದಿಮೆಗಳ ನೌಕರರು, ಸಾಹಿತಿಗಳು, ಚಿಂತಕರು, ಚಿತ್ರರಂಗದವರು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಸೇರಿದಂತೆ ಸರ್ವರೂ ಭಾಗವಹಿಸಲು ಆಹ್ವಾನಿಸಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡ್ಯ ಜಿಲ್ಲೆಯಲ್ಲಿಂದು ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದರು. ಮಂಡ್ಯ ನಗರದ ಬೆಂಗಳೂರು- ಮೈಸೂರು ಹೆದ್ದಾರಿಯಲ್ಲಿ ನಿರ್ಮಾಣವಾಗುತ್ತಿರುವ ಡಿಸಿಸಿ ಬ್ಯಾಂಕ್ ಕಟ್ಟಡದ ಭೂಮಿ ಪೂಜೆ ನೆರವೇರಿಸಿದರು. ಬಳಿಕ ಮೈಶುಗರ್ ಕಾರ್ಖಾನೆಯ ೩೦ ಮೆಗಾವ್ಯಾಟ್ ಟರ್ಬೋ ಜನರೇಟರ್ ಗೆ ಪ್ರಾಯೋಗಿಕ ಚಾಲನೆ ನೀಡಿದರು. ನಂತರ ಕಾರ್ಖಾನೆ ಆವರಣದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕಂಚಿನ ಪುತ್ಥಳಿ ಅನಾವರಣಗೊಳಿಸಿದರು.

<><*<><>*><>

ಭಾರತದ ದೇವಾಲಯಗಳು ಮಠ ಮಂದಿರಗಳು ರಾಷ್ಟ್ರೀಯ ದೃಷ್ಟಿಕೋನದ ಪ್ರತೀಕವಾಗಿದೆ ಎಂದು ಕೇಂದ್ರ ಸಂಸ್ಕೃತಿ, ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಹೊರನಾಡು ಕ್ಷೇತ್ರದ ೫ ನೇ ಧರ್ಮಕರ್ತರಾದ ಶ್ರೀ ವೆಂಕಟಸುಬಯ್ಯ ಜೋಯಿಸ ಹಾಗು ನರಸಮ್ಮ ದಂಪತಿಗಳ ಪುತ್ಥಳಿ ಅನಾವರಣ ಹಾಗು ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಇಂದು  ಪಾಲ್ಗೊಂಡು ಮಾತನಾಡಿದ ಅವರು ದೇವಾಲಯಗಳು ಕೇವಲ ಪೂಜೆಯ ಸ್ಥಳವಾಗಿರದೆ ಸಾಮಾಜಿಕ ನ್ಯಾಯ, ಸಮಾನತೆ, ಸಶಕ್ತತೆಯ ಕೇಂದ್ರಗಳಾಗಬೇಕು. ಎಂದರು. ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಹಿಂದು ಧರ್ಮವು ವಿಶ್ವ ಬಂಧುತ್ವ ವಿಶ್ವ ಶಾಂತಿಯನ್ನು ಪ್ರೇರಿಪಿಸುತ್ತದೆ ಎಂದರು. ಕಾರ್ಯಕ್ರಮದಲ್ಲಿ ಶ್ರೀ ಸ್ವಯಂಪ್ರಕಾಶ ಸ್ವಾಮೀಜಿ, ಸಂಸದ ಶ್ರೀ ಕೋಟಾ ಶ್ರೀನಿವಾಸ ಪೂಜಾರಿ, ಪರಿಷತ್ ಸದಸ್ಯ  ಸಿ.ಟಿ ರವಿ. ಶಾಸಕಿ ನಯನ ಮೋಟಮ್ಮ, ಮಾಜಿ ಸಚಿವ ಬಿ.ಎಲ್ ಶಂಕರ್, ಹೊರನಾಡು ಧರ್ಮದರ್ಶಿ ಶ್ರೀ ಭಿಮೇಶ್ವರ ಜೋಶಿ ಸೇರಿದಂತೆ ಆನೇಕ ಗಣ್ಯರು ಉಪಸ್ಥಿತರಿದ್ದರು.

<><*<><>*><>

ಕರ್ನಾಟಕ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿ ಪ್ರಾದೇಶಿಕ ಅಸಮತೋಲನ ನಿವಾರಣೆ ಕುರಿತ ಶಿಫಾರಸ್ಸು ವರದಿಯನ್ನು ಮುಂದಿನ ಸೆಪ್ಟೆಂಬರ್ ವೇಳೆಗೆ ಸರ್ಕಾರಕ್ಕೆ ಸಲ್ಲಿಸಲಿದೆ ಎಂದು ಸಮಿತಿ  ಅಧ್ಯಕ್ಷ ಹಾಗೂ ಆರ್ಥಿಕ ತಜ್ಞ ಪ್ರೊ ಎಂ.ಗೋವಿಂದ ರಾವ್ ತಿಳಿಸಿದ್ದಾರೆ.  ರಾಜ್ಯದಾದ್ಯಂತ ಮಾಹಿತಿ ಸಂಗ್ರಹಿಸಿ ಕೋಲಾರದಲ್ಲಿಂದು ಸಂವಾದ ಸಭೆ ನಡೆಸಿ ಸಾರ್ವಜನಿಕ ಶಿಫಾರಸ್ಸು ಸ್ವೀಕರಿಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು ಮುಖ್ಯವಾಗಿ ತಲಾದಾಯ, ಆರೋಗ್ಯ ಮತ್ತು ಶಿಕ್ಷಣಕ್ಕೆ ಹಾಗೂ ಸುಸ್ಥಿರ ಅಭಿವೃದ್ಧಿಗೆ

ಪೂರಕವಾಗಿರುವ ಸೂಚ್ಯಂಕಗಳನ್ನು ಪರಿಗಣಿಸಿ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಕೋಲಾರ ಭಾಗದಲ್ಲಿ ನೀರಾವರಿ ಸಮಸ್ಯೆಗೆ, ಕೃಷಿ, ರೇಷ್ಮೆ ಹಾಗೂ ತೋಟಗಾರಿಕೆ ಬೆಳೆಗಳ ಆಧಾರಿತ ಉತ್ಪನ್ನಗಳನ್ನು ತಯಾರಿಸುವ ಉತ್ಪಾದನಾ ಘಟಕಗಳ ಸ್ಥಾಪನೆಗೆ, ಶೀತಲ ಘಟಕಗಳ ಸ್ಥಾಪನೆ, ಮಳೆ ಕೊಯ್ಲು, ಹಾಲಿನ ಪ್ರೋತ್ಸಾಹಧನ ಹೆಚ್ಚಳ, ಪಶು ಆಹಾರ ದರ ಕಡಿತಕ್ಕೆ, ಪ್ರವಾಸಿ ತಾಣಗಳ ಅಭಿವೃದ್ಧಿಗೆ, ಕೈಗಾರಿಕೆಗಳು ನಿರೀಕ್ಷಿಸುವ ಮಾನವ ಸಂಪನ್ಮೂಲ ಹಾಗೂ ಕೌಶಲಾಭಿವೃದ್ಧಿ ಪೂರೈಕೆಗೆ ಪೂರಕವಾಗಿ ಹಾಗೂ ಬಾಲ್ಯವಿವಾಹ ನಿಯಂತ್ರಣ ವಿಚಾರವಾಗಿ ಹಲವು ಸಲಹೆ ಹಾಗೂ ಶಿಫಾರಸುಗಳನ್ನು ಸ್ವೀಕರಿಸಲಾಗಿದೆ ಎಂದು ಅವರು ತಿಳಿಸಿದರು. ಪ್ರಾದೇಶಿಕ ಅಸಮಾನತೆ ನಿವಾರಣೆಗಾಗಿ ಈಗಾಗಲೇ ಬೆಂಗಳೂರು ವಿಭಾಗದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಹಾಗೂ ರಾಮನಗರ ಜಿಲ್ಲೆಗಳ ಅಧಿಕಾರಿಗಳು, ಸರ್ಕಾರೇತರ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಂದ ಮನವಿ ಹಾಗೂ ಮಾಹಿತಿ ಪಡೆಯಲಾಗಿದೆ. ಜತೆಗೆ ಲಿಖಿತವಾಗಿಯೂ ಏನಾದರೂ ಅಹವಾಲು, ಸಲಹೆ ಮನವಿ ಇದ್ದರೆ ನೇರವಾಗಿ ಬೆಂಗಳೂರಿನಲ್ಲಿರುವ ಸಮಿತಿ ಕಚೇರಿಗೆ ಕಳುಹಿಸಿಕೊಡಲು ಖುದ್ದಾಗಿ ಸಲ್ಲಿಸಲು ಸಹ ತಿಳಿಸಲಾಗಿದೆ ಎಂದು ಮಾಹಿತಿ ನೀಡಿದರು. ಕೋಲಾರ ಸಂಸದ ಮಲ್ಲೇಶಬಾಬು ಮಾತನಾಡಿ ಮುಂದಿನ ದಿನಗಳಲ್ಲಿ ಕೃಷ್ಣಾ ನದಿ ನೀರನ್ನು ಹಾಗೂ ಎತ್ತಿನಹೊಳೆ ಯೋಜನೆಯನ್ನು ಕೋಲಾರ ಜಿಲ್ಲೆಗೆ ಹರಿಸಿದರೆ ಶಾಶ್ವತ ಪರಿಹಾರ ಒದಗಿಸಿದಂತಾಗುವುದು ಎಂದು ಸಲಹೆ ನೀಡಿದರು.

**<><*<><>*><>**

ಬೆಂಗಳೂರು ನಗರದ ವೃಷಭಾವತಿ ವ್ಯಾಲಿಯಿಂದ ಸಂಸ್ಕರಿಸಿದ ನೀರನ್ನು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು ಜಿಲ್ಲೆಯ ೭೦ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಕಾಮಗಾರಿಗೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಅವರು ಮಾತಾನಾಡಿ ಸಂಕಷ್ಟದಲ್ಲಿರುವ ರೈತರ ಉಳಿವಿಗಾಗಿ ಹಾಗೂ ಅನುಕೂಲಕ್ಕಾಗಿ ರಾಜ್ಯ ಸರ್ಕಾರ ಯೋಜನೆಗಳನ್ನು ರೂಪಿಸುತ್ತಿದ್ದು, ೧೯೦೦ ಕೋಟಿ ರೂಗಳ ವೃಷಭಾವತಿ ಯೋಜನೆಯನ್ನು ಜಾರಿ ಮಾಡುತ್ತಿದೆ. ಒಟ್ಟು ೧೪೮ ಕೆರೆಗಳಿಗೆ ನೀರು ಹರಿಸುವ ಯೋಜನೆ ಇದಾಗಿದ್ದು, ಮೂರು ಹಂತದಲ್ಲಿ ಯೋಜನೆಯನ್ನು ಕೈಗೊಳ್ಳಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದ ಕರೇಗೌಡನಹಳ್ಳಿ ಕೆರೆಯಲ್ಲಿ ಮಾತನಾಡಿದ ಅವರು, ಸಂಸ್ಕರಿಸಿದ ನೀರಿನ ಮೊದಲ ಹಂತದ ಯೋಜನೆ ೧೧೮೧

ಕೋಟಿ ರೂಗಳಾಗಿದ್ದು, ಕೆರೆಗಳನ್ನು ತುಂಬಿಸಿ ನೀರಿನ ಬವಣೆ ತೀರಿಸಲಾಗುವುದು. ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದರು.

**ಧ್ವನಿ: ಡಿ.ಕೆ.ಶಿವಕುಮಾರ್ ( ೪೫ ಸೆಕೆಂಡ್ಸ್ )**

ಕಂದಾಯ ಸಚಿವ ಕೃಷ್ಣ ಬೈರೇಗೌಡ ಮಾತನಾಡಿ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ರೈತರ ಬಹುದಿನಗಳ ನೀರಿನ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಬದ್ಧವಾಗಿದೆ. ೨೦೧೮ ರಲ್ಲಿ ಕೆ.ಸಿ ವ್ಯಾಲಿ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿ ೪೦೦ ಕೆರೆಗಳಿಗೆ ನೀರು ಹರಿಸಲಾಗಿದೆ, ೨೦೧೭ ರಲ್ಲಿ ಎಚ್.ಎನ್.ವ್ಯಾಲಿಗೆ ಶಂಕುಸ್ಥಾಪನೆ, ನೆರವೇರಿಸಲಾಗಿದೆ ಎಂದರು.

**<><*<><>*><>**

ತುರ್ತು ಸಂದರ್ಭದಲ್ಲಿ ಪರಿಣಾಮಕಾರಿಯಾಗಿ ನಾಗರೀಕರ ರಕ್ಷಣೆ ಮಾಡುವ ಕುರಿತಂತೆ ಕೇಂದ್ರ ಸರ್ಕಾರದಿಂದ ಅಣಕು ಕಾರ್ಯಾಚರಣೆ ನಡೆಸಲು ನಿರ್ದೇಶನ ಬಂದಿದ್ದು, ಅದರಂತೆ ಕಾರವಾರ ತಾಲೂಕಿನಲ್ಲಿ ಇದೇ ಸೋಮವಾರ ಅಣಕು ಕಾರ್ಯಚರಣೆ ನಡೆಸಲಾಗುವುದು ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷಿಪ್ರಿಯ ತಿಳಿಸಿದ್ದಾರೆ.

**ಧ್ವನಿ : ಲಕ್ಷ್ಮೀಪ್ರೀಯ ( ೩೦ ಸೆಕೆಂಡ್ಸ್)**

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**